Akashvani: Bangalore
National Bulletin In Kannada
09.05.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
09.05.2026: 7.35AM
********

**ಮುಖ್ಯಾಂಶಗಳು :**

1. ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಇಂದು ಸುವೇಂದು ಅಧಿಕಾರಿ ಪ್ರಮಾಣವಚನ ಸ್ವೀಕಾರ
2. ತಮಿಳುನಾಡು ರಾಜಕೀಯದಲ್ಲಿ ಅನಿಶ್ಚಿತತೆ ಮುಂದುವರಿಕೆ; ಟಿವಿಕೆ ಪಕ್ಷಕ್ಕೆ ಬೆಂಬಲ ನಿರಾಕರಿಸಿದ ಇಂಡಿಯನ್ ಯೂನಿಯನ್ ಮುಸ್ಲೀಂ ಲೀಗ್
3. ಎನ್‌ಐಎ ಪ್ರಕರಣಗಳ ತ್ವರಿತ ವಿಚಾರಣೆಗೆ ವಿಶೇಷ ನ್ಯಾಯಾಲಯ ಸ್ಥಾಪಿಸಲು ಸುಪ್ರೀಂಕೋರ್ಟ್ ಆದೇಶ
4. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಅಮೆರಿಕ ಬೆಂಬಲಿತ ಕರಡು ನಿರ್ಣಯ ತಿರಸ್ಕರಿಸಿದ ಇರಾನ್; ರಾಜಕೀಯ ಪ್ರೇರಿತವೆಂದು ಟೀಕೆ
5. ಎಎಫ್‌ಸಿ ಏಷ್ಯನ್ ಕಪ್ ಫುಟ್ಬಾಲ್; ಕ್ವಾರ್ಟರ್‌ಫೈನಲ್ ಪ್ರವೇಶಿಸಿದ ಭಾರತದ ೧೭ ವರ್ಷದೊಳಗಿನವರ ಬಾಲಕಿಯರ ತಂಡ

**********

ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಸುವೇಂದು ಅಧಿಕಾರಿ ಇಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಕೋಲ್ಕತ್ತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ಈ ಸಮಾರಂಭ ನಡೆಯಲಿದ್ದು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಸೇರಿದಂತೆ ಕೇಂದ್ರ ಸಚಿವರು ಹಾಗೂ ಎನ್‌ಡಿಎ ಆಡಳಿತವಿರುವ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲಿದ್ದಾರೆ. ನಿನ್ನೆ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಸಚಿವ ಅಮಿತ್ ಶಾ ಅವರ ಸಮ್ಮುಖದಲ್ಲಿ ಸುವೇಂದು ಅಧಿಕಾರಿ ಅವರನ್ನು ಸರ್ವಾನುಮತದಿಂದ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಲಾಯಿತು. ಸಭೆಯ ನಂತರ ಸುವೇಂದು ಅಧಿಕಾರಿ, ಪಶ್ಚಿಮ

ಬಂಗಾಳ ರಾಜ್ಯಪಾಲ ಆರ್.ಎನ್. ರವಿ ಅವರನ್ನು ಭೇಟಿ ಮಾಡಿ, ಸರ್ಕಾರ ರಚನೆಯ ಹಕ್ಕು ಮಂಡಿಸಿದರು. ಈ ಚುನಾವಣೆಯಲ್ಲಿ ತೃಣಮೂಲ ಕಾಂಗ್ರೆಸ್‌ನ ೧೫ ವರ್ಷಗಳ ಸುದೀರ್ಘ ಆಡಳಿತವನ್ನು ಅಂತ್ಯಗೊಳಿಸುವ ಮೂಲಕ ಬಿಜೆಪಿ ಐತಿಹಾಸಿಕ ಜಯ ದಾಖಲಿಸಿದೆ.

**********

ತಮಿಳುನಾಡಿನಲ್ಲಿ ಸರ್ಕಾರ ರಚನೆ ಕುರಿತಾದ ಅನಿಶ್ಚಿತತೆ ಮುಂದುವರಿದಿದೆ. ಟಿವಿಕೆ ಮುಖ್ಯಸ್ಥ ಸಿ. ಜೋಸೆಫ್ ವಿಜಯ್ ನೇತೃತ್ವದ ಸರ್ಕಾರ ರಚನೆಗೆ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ - ಐಯುಎಂಎಲ್ ಪಕ್ಷ ಬೆಂಬಲ ನಿರಾಕರಿಸಿದೆ. ಇದು ಸರ್ಕಾರ ರಚನೆ ಪ್ರಕ್ರಿಯೆಗೆ ಹೊಸ ತಿರುವು ನೀಡಿದೆ. ಇಂದು ನಡೆಯಬೇಕಿದ್ದ ಪ್ರಮಾಣವಚನ ಸಮಾರಂಭ ನಡೆಯುವುದು ಬಹುತೇಕ ರದ್ದಾಗಿದ್ದು, ನಟ ವಿಜಯ್ ಬಹುಮತ ಸಾಬೀತುಪಡಿಸಲು ವಿಸಿಕೆ ಬೆಂಬಲದ ನಿರೀಕ್ಷೆಯಲ್ಲಿದ್ದಾರೆ. ಈ ನಡುವೆ ವಿಸಿಕೆ ಶಾಸಕ ವನ್ನಿ ಅರಸು ತಾವು ಸರ್ಕಾರದಲ್ಲಿ ಭಾಗಿಯಾಗುವುದಾಗಿ ತಿಳಿಸಿದ್ದಾರೆ. ಮತ್ತೊಂದೆಡೆ, ಎಎಮ್‌ಎಂಕೆಯ ಟಿಟಿವಿ ದಿನಕರನ್ ಅವರು ಎಡಪ್ಪಾಡಿ ಪಳನಿಸ್ವಾಮಿ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲು ರಾಜ್ಯಪಾಲರಿಗೆ ಶಾಸಕ ಎಸ್. ಕಾಮರಾಜ್ ಅವರ ಬೆಂಬಲ ಪತ್ರ ಸಲ್ಲಿಸಿ ಅಚ್ಚರಿ ಮೂಡಿಸಿದ್ದಾರೆ. ಐಯುಎಂಎಲ್ ಬೆಂಬಲ ನಿರಾಕರಿಸಿದ ಬೆನ್ನಲ್ಲೇ ತಮಿಳುನಾಡು ರಾಜಕೀಯ ಲೆಕ್ಕಚಾರ ತೀವ್ರಗೊಂಡಿದ್ದು, ಯಾರು ಅಧಿಕಾರ ನಡೆಸಲಿದ್ದಾರೆ ಎಂಬ ಕುತೂಹಲ ಮೂಡಿಸಿದೆ.

**********

ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ, ತನಿಖೆ ನಡೆಸುತ್ತಿರುವ ಪ್ರಕರಣಗಳ ವಿಚಾರಣೆಯಲ್ಲಿ ಆಗುತ್ತಿರುವ ವಿಳಂಬವನ್ನು ಗಂಭೀರವಾಗಿ ಪರಿಗಣಿಸಿರುವ ಸರ್ವೋಚ್ಚ ನ್ಯಾಯಾಲಯ, ಬಾಕಿಯಿರುವ ವಿಚಾರಣೆಗಳಿಗಾಗಿ ಕನಿಷ್ಠ ಒಂದು ವಿಶೇಷ ನ್ಯಾಯಾಲಯವನ್ನು ಒಂದು ತಿಂಗಳೊಳಗೆ ಸ್ಥಾಪಿಸುವಂತೆ ಮಹತ್ವದ ನಿರ್ದೇಶನ ನೀಡಿದೆ. ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿ ಜಾಯ್ ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠ, ಬಾಕಿ ಇರುವ ಪ್ರಕರಣಗಳ ಸಂಖ್ಯೆ ೧೫ಕ್ಕಿಂತ ಹೆಚ್ಚಿದ್ದರೆ ಎರಡು ನ್ಯಾಯಾಲಯಗಳನ್ನು ಸ್ಥಾಪಿಸಬೇಕು ಎಂದು ಸೂಚಿಸಿದೆ. ಈ ವಿಶೇಷ ನ್ಯಾಯಾಲಯಗಳು ಕೇವಲ ಎನ್‌ಐಎ ಪ್ರಕರಣಗಳನ್ನು ಮಾತ್ರ ದಿನನಿತ್ಯದ ಆಧಾರದ ಮೇಲೆ ವಿಚಾರಣೆ ನಡೆಸಬೇಕು ಮತ್ತು

ತಿಂಗಳಿಗೆ ಕನಿಷ್ಠ ಒಂದು ಪ್ರಕರಣವನ್ನು ವಿಲೇವಾರಿ ಮಾಡಬೇಕು ಎಂದು ನ್ಯಾಯಪೀಠ ನಿರ್ದೇಶಿಸಿದೆ.

**********

ಮೂರು ಕೆರಿಬಿಯನ್ ರಾಷ್ಟ್ರಗಳ ಪ್ರವಾಸದಲ್ಲಿರುವ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಗಯಾನಾದ ಆರೋಗ್ಯ ಸಚಿವ ಡಾ. ಫ್ರ್ಯಾಂಕ್ ಆಂಥೋನಿ ಅವರನ್ನು ಭೇಟಿ ಮಾಡಿ, ಉಭಯ ರಾಷ್ಟ್ರಗಳ ನಡುವಿನ ಆರೋಗ್ಯ ಕ್ಷೇತ್ರದ ಸಂಬಂಧಗಳ ಪ್ರಗತಿಯ ಕುರಿತು ಚರ್ಚಿಸಿದರು. ಗಯಾನಾದ ಜಾರ್ಜ್ ಟೌನ್‌ನಲ್ಲಿ ನಡೆದ ಈ ಭೇಟಿಯಲ್ಲಿ ಆರೋಗ್ಯ ಕ್ಷೇತ್ರದಲ್ಲಿನ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಕುರಿತು ಸಮಾಲೋಚನೆ ನಡೆಸಲಾಯಿತು. ಮೂರು ರಾಷ್ಟ್ರಗಳ ಕೆರಿಬಿಯನ್ ಪ್ರವಾಸದ ಭಾಗವಾಗಿ ಸಚಿವರು ಗಯಾನಾಗೆ ಭೇಟಿ ನೀಡಿದ್ದಾರೆ. ಪ್ರವಾಸದ ಮೊದಲ ಚರಣದಲ್ಲಿ ಜಮೈಕಾ, ನಂತರ ಸುರಿನಾಮ್‌ಗೆ ಭೇಟಿ ನೀಡಿದ್ದ ಅವರು, ಅಂತಿಮ ಚರಣದಲ್ಲಿ ಟ್ರಿನಿಡಾಡ್ ಮತ್ತು ಟೊಬ್ಯಾಗೊಗೆ ತೆರಳಲಿದ್ದಾರೆ.

**********

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಅಮೆರಿಕ ಬೆಂಬಲಿತ ಕರಡು ನಿರ್ಣಯವನ್ನು ಇರಾನ್ ತಿರಸ್ಕರಿಸಿದ್ದು, ಇದು ರಾಜಕೀಯ ಪ್ರೇರಿತವಾಗಿದೆ ಎಂದು ಟೀಕಿಸಿದೆ. ಇದು ಹಾರ್ಮುಜ್ ಜಲಸಂಧಿಯ ನಿಯಂತ್ರಣಕ್ಕಾಗಿ ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷವನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ನೌಕಾ ದಿಗ್ಬಂಧನ ತೆರವು ಮತ್ತು ಯುದ್ಧದ ಅಂತ್ಯವೇ ಸ್ಥಿರತೆಗೆ ಇರುವ ಏಕೈಕ ಮಾರ್ಗ ಎಂದು ಇರಾನ್ ಪ್ರತಿಪಾದಿಸಿದೆ. ಇತ್ತ ಅಮೆರಿಕ ಮತ್ತು ಅದರ ಮಿತ್ರ ರಾಷ್ಟ್ರಗಳು ಈ ಕಾರಿಡಾರ್‌ನಲ್ಲಿ ಹಡಗು ಸಂಚಾರದ ಭದ್ರತೆಗಾಗಿ ಕರಡು ನಿರ್ಣಯವನ್ನು ಬೆಂಬಲಿಸಿವೆ. ಈ ನಡುವೆ, ಉಭಯ ರಾಷ್ಟ್ರಗಳ ನಡುವಿನ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳು ಮುಂದುವರಿದಿದ್ದು, ಯುಎಇ ಬಳಿ ಹಡಗಿನಲ್ಲಿದ್ದ ಭಾರತೀಯ ಸಿಬ್ಬಂದಿ ಒಬ್ಬರು ಮೃತಪಟ್ಟಿರುವುದು ಆತಂಕ ಮೂಡಿಸಿದೆ. ದುಬೈನ ಭಾರತೀಯ ರಾಯಭಾರ ಕಚೇರಿ ಈ ಘಟನೆಗೆ ಸಂತಾಪ ವ್ಯಕ್ತಪಡಿಸಿದೆ. ಸಂಘರ್ಷದ ನಡುವೆಯೂ ರಾಜತಾಂತ್ರಿಕ ಮಾತುಕತೆಯ ಬಾಗಿಲು ತೆರೆದಿದ್ದು, ಯುದ್ಧ ಸ್ಥಗಿತಗೊಳಿಸಿ, ಪರಮಾಣು ಯೋಜನೆ ಮತ್ತು ನಿರ್ಬಂಧಗಳ ಕುರಿತು ಚರ್ಚಿಸುವ ಅಮೆರಿಕದ ೧೪ ಅಂಶಗಳ ಪ್ರಸ್ತಾವನೆ ಇನ್ನು ಪರಿಶೀಲನೆಯಲ್ಲಿದೆ. ಇರಾನ್ ಸದ್ಯಕ್ಕೆ ಈ ಪ್ರಸ್ತಾವನೆಗೆ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

**********

ಇರಾನ್‌ನ ಶಾಹೇದ್ ಡ್ರೋನ್ಸ್ ಮತ್ತು ಬ್ಯಾಲಿಸ್ಟಿಕ್ ಕ್ಷಿಪಣಿಗಳ ತಯಾರಿಕೆಗೆ ಅಗತ್ಯವಾದ ಕಚ್ಚಾ ಸಾಮಗ್ರಿ ಹಾಗೂ ಶಸ್ತ್ರಾಸ್ತ್ರಗಳನ್ನು ಪೂರೈಸಿದ ಆರೋಪದ ಮೇಲೆ ಅಮೆರಿಕ, ಚೀನಾ ಮತ್ತು ಹಾಂಕಾಂಗ್ ಮೂಲದ ಸಂಸ್ಥೆಗಳು ಸೇರಿದಂತೆ ಒಟ್ಟು ಹತ್ತು ವ್ಯಕ್ತಿ ಹಾಗೂ ಕಂಪನಿಗಳ ಮೇಲೆ ಹೊಸ ನಿರ್ಬಂಧಗಳನ್ನು ಹೇರಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಚೀನಾ ಪ್ರವಾಸ ಕೈಗೊಳ್ಳುವ ಮುನ್ನವೇ ಈ ಕ್ರಮ ಕೈಗೊಳ್ಳಲಾಗಿದ್ದು, ಇರಾನ್‌ನ ಮಿಲಿಟರಿ ಶಕ್ತಿಯನ್ನು ಕುಂದಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಹಾರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಸಂಚಾರಕ್ಕೆ ಅಡ್ಡಿಪಡಿಸುತ್ತಿರುವ ಇರಾನ್‌ನ ಸಾಮರ್ಥ್ಯವನ್ನು ಹತ್ತಿಕ್ಕಲು ಅಮೆರಿಕ ಈ ನಿರ್ಧಾರ ಕೈಗೊಂಡಿದೆ.

**********

ರಷ್ಯಾದಲ್ಲಿ ಆಚರಿಸಲಾಗುವ 'ವಿಜಯೋತ್ಸವ ದಿನ'ದ ಅಂಗವಾಗಿ ರಷ್ಯಾ ಮತ್ತು ಉಕ್ರೇನ್ ನಡುವೆ ಇಂದಿನಿಂದ ಮೂರು ದಿನಗಳ ಕಾಲ ತಾತ್ಕಾಲಿಕ ಕದನ ವಿರಾಮ ಏರ್ಪಟ್ಟಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಈ ಅವಧಿಯಲ್ಲಿ ಎಲ್ಲಾ ಮಿಲಿಟರಿ ಕಾರ್ಯಾಚರಣೆಗಳು ಸ್ಥಗಿತಗೊಳ್ಳಲಿದ್ದು, ಒಪ್ಪಂದದ ಭಾಗವಾಗಿ ಉಭಯ ದೇಶಗಳ ನಡುವೆ ತಲಾ ಒಂದು ಸಾವಿರ ಯುದ್ಧ ಕೈದಿಗಳ ವಿನಿಮಯ ನಡೆಯಲಿದೆ. ತಮ್ಮ ನೇರ ಮನವಿಯ ಮೇರೆಗೆ ಈ ಬೆಳವಣಿಗೆ ನಡೆದಿದೆ ಎಂದು ತಿಳಿಸಿರುವ ಅಧ್ಯಕ್ಷ ಟ್ರಂಪ್, ಯುದ್ಧವನ್ನು ಶಾಶ್ವತವಾಗಿ ಅಂತ್ಯಗೊಳಿಸಲು ಮಾತುಕತೆಗಳು ಜಾರಿಯಲ್ಲಿವೆ ಎಂದು ಹೇಳಿದ್ದಾರೆ. ಎರಡನೇ ಮಹಾಯುದ್ಧದ ವಿಜಯದ ಸ್ಮರಣಾರ್ಥ ರಷ್ಯಾದಲ್ಲಿ ಇಂದು ವಿಜಯೋತ್ಸವ ದಿನವನ್ನು ಆಚರಿಸಲಾಗುತ್ತಿದ್ದು, ಪ್ರಸ್ತುತ ಯುದ್ಧದ ಸನ್ನಿವೇಶದ ಕಾರಣ ಈ ಬಾರಿ ಸಾಂಪ್ರದಾಯಿಕ ಮಿಲಿಟರಿ ಪರೇಡ್‌ಗಳನ್ನು ನಡೆಸಲಾಗುತ್ತಿಲ್ಲ.

**********

ದೀರ್ಘಕಾಲದ ಸಂಘರ್ಷವನ್ನು ಅಂತ್ಯಗೊಳಿಸುವ ನಿಟ್ಟಿನಲ್ಲಿ ಇಸ್ರೇಲ್ ಮತ್ತು ಲೆಬನಾನ್ ರಾಷ್ಟ್ರಗಳು ಇದೆ. ೧೪ ಮತ್ತು ೧೫ ರಂದು ಅಮೆರಿಕದ ಮಧ್ಯಸ್ಥಿಕೆಯಲ್ಲಿ ಮಹತ್ವದ ಶಾಂತಿ ಮಾತುಕತೆಯನ್ನು ಪುನರಾರಂಭಿಸಲಿವೆ ಎಂದು ಅಮೆರಿಕದ ವಿದೇಶಾಂಗ ಇಲಾಖೆ ತಿಳಿಸಿದೆ.

ಎರಡು ದಿನಗಳ ಕಾಲ ನಡೆಯಲಿರುವ ಈ ಚರ್ಚೆಯಲ್ಲಿ ಉಭಯ ದೇಶಗಳ ನಿಯೋಗಗಳು ಭಾಗವಹಿಸಲಿದ್ದು, ಸಮಗ್ರ ಶಾಂತಿ ಮತ್ತು ಭದ್ರತಾ ಒಪ್ಪಂದವನ್ನು ರೂಪಿಸುವ ಕುರಿತು ಸಮಾಲೋಚನೆ ನಡೆಸಲಿವೆ. ಈ ಮಾತುಕತೆಯು ಉಭಯ ದೇಶಗಳ ಪ್ರಮುಖ ಭದ್ರತಾ ಕಾಳಜಿಗಳನ್ನು ಬಗೆಹರಿಸುವ ಮತ್ತು ಮಧ್ಯಪ್ರಾಚ್ಯದಲ್ಲಿ ಸ್ಥಿರತೆಯನ್ನು ತರುವ ಗುರಿಯನ್ನು ಹೊಂದಿದೆ.

**********

ಡಿಜಿಟಲ್ ಗುರುತು ದತ್ತಾಂಶದ ಮೂಲಕ ಸಾರ್ವಜನಿಕ ಸೇವೆ ಮತ್ತು ಆಡಳಿತವನ್ನು ಉತ್ತಮಗೊಳಿಸುವ ಉದ್ದೇಶದ 'ಯುಐಡಿಎಐ ಡೇಟಾ ಹ್ಯಾಕಥಾನ್ ೨೦೨೬' ಯಶಸ್ವಿಯಾಗಿ ಸಂಪನ್ನಗೊಂಡಿದೆ. ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹಮ್ಮಿಕೊಂಡಿದ್ದ ಈ ಸ್ಪರ್ಧೆಯಲ್ಲಿ ೧೫ ಸಾವಿರಕ್ಕೂ ಹೆಚ್ಚು ತಂಡಗಳು ನೋಂದಾಯಿಸಿಕೊಂಡು, ೫ ಸಾವಿರಕ್ಕೂ ಅಧಿಕ ತಂಡಗಳು ನವೀನ ತಾಂತ್ರಿಕ ಪರಿಹಾರಗಳನ್ನು ಪ್ರಸ್ತುತಪಡಿಸಿವೆ. ಯುಐಡಿಎಐ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಿವೇಕ್ ಚಂದ್ರ ವರ್ಮಾ ಅವರು ವಿದ್ಯಾರ್ಥಿಗಳ ಸೃಜನಶೀಲತೆಯನ್ನು ಶ್ಲಾಘಿಸಿ, ಇಂತಹ ಆವಿಷ್ಕಾರಗಳು ನೀತಿ ನಿರೂಪಣೆ ಮತ್ತು ಆಡಳಿತದ ದಕ್ಷತೆ ಹೆಚ್ಚಿಸಲು ಪೂರಕವಾಗಿವೆ ಎಂದು ತಿಳಿಸಿದರು. ದತ್ತಾಂಶದ ಜವಾಬ್ದಾರಿಯುತ ಬಳಕೆಯು ಸುಲಲಿತ ಆಡಳಿತಕ್ಕೆ ಅತ್ಯಗತ್ಯ ಎಂಬುದನ್ನು ಈ ಹ್ಯಾಕಥಾನ್ ಪುನರುಚ್ಚರಿಸಿದೆ.

**********

ಭಾರತದ ೧೭ ವರ್ಷದೊಳಗಿನವರ ಬಾಲಕಿಯರ ತಂಡವು ಫುಟ್ಬಾಲ್ ಇತಿಹಾಸದಲ್ಲಿ ಹೊಸ ದಾಖಲೆ ಬರೆದಿದೆ. ಚೀನಾದ ಸುಝೌನಲ್ಲಿ ನಿನ್ನೆ ನಡೆದ ಬಿ ಗುಂಪಿನ ಅಂತಿಮ ಪಂದ್ಯದಲ್ಲಿ ಲೆಬನಾನ್ ತಂಡವನ್ನು ४-೦ ಅಂತರದಿಂದ ಮಣಿಸಿದ ಭಾರತ, ಮೊದಲ ಬಾರಿಗೆ ಎಎಫ್‌ಸಿ ಏಷ್ಯನ್ ಕಪ್‌ನ ಕ್ವಾರ್ಟರ್‌ಫೈನಲ್‌ಗೆ ಲಗ್ಗೆ ಇಟ್ಟಿದೆ. ಭಾರತದ ಪರ ಪ್ರೀತಿಕಾ ಬರ್ಮನ್ ೭ನೇ ಮತ್ತು ಲ೫ನೇ ನಿಮಿಷದಲ್ಲಿ ಎರಡು ಗೋಲು ಗಳಿಸಿದರು. ಉಳಿದಂತೆ ಆಲ್ವಾ ದೇವಿ ಸಂಜಮ್ ೩೬ನೇ ನಿಮಿಷ ಮತ್ತು ಜೋಯಾ ೭೨ನೇ ನಿಮಿಷದಲ್ಲಿ ತಲಾ ಒಂದು ಗೋಲು ಗಳಿಸಿ ತಂಡದ ಭರ್ಜರಿ ಜಯಕ್ಕೆ ಕಾರಣರಾದರು. ಈ ಟೂರ್ನಿಯಲ್ಲಿ ಸೆಮಿಫೈನಲ್ ತಲುಪಿದರೆ ಭಾರತವು ೨೦೨೬ರ ಫಿಫಾ ೧೭ ವರ್ಷದೊಳಗಿನವರ ಮಹಿಳಾ ವಿಶ್ವಕಪ್‌ಗೆ ನೇರ ಅರ್ಹತೆ ಪಡೆಯಲಿದೆ.

**********

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ೮ ವಿಕೆಟ್‌ಗಳ ಜಯ ದಾಖಲಿಸಿದೆ. ಇದರೊಂದಿಗೆ ಡೆಲ್ಲಿ ಕ್ಯಾಪಿಟಲ್ಸ್‌ಗೆ ಪ್ಲೇ ಅಫ್ ಹಾದಿ ಕಠಿಣವಾಗಿದೆ.

*****END*****